ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	:	81(974 + 933)
ಉತ್ತರಿಸಬೇಕಾದ ದಿನಾಂಕ	:	20.09.2021
ಸದಸ್ಯರ ಹೆಸರು	:	ಶ್ರೀ ಪುಟ್ಟಣ್ಣ(ಶಿಕ್ಷಕರ ಕ್ಷೇತ್ರ) ಹಾಗೂ ಶ್ರೀ ನಸೀರ್ ಅಹ್ಮದ್(ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ಸಚಿವರು	:	ಮಾನ್ಯ ಅರಣ್ಯ, ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
ಅ	ಅರಣ್ಯ ಇಲಾಖೆಯು ಅರಣ್ಯ ವೀಕ್ಷಕ ಹುದ್ದೆಯಿಂದ ಹಿಡಿದು ಅರಣ್ಯ ರಕ್ಷಕ, ಉಪ ವಲಯ ಅರಣ್ಯಾಧಿಕಾರಿ ಮತ್ತು ವಲಯ ಅರಣ್ಯಾಧಿಕಾರಿ ಹುದ್ದೆಗಳವರೆಗೂ ಇಲಾಖೆಯ ನೇಮಕಾತಿಯಲ್ಲಿ ನಡೆಯುತ್ತಿರುವ ಭ್ರಷ್ಟಾಚಾರ ಕುರಿತು ಈಗಾಗಲೇ ಭ್ರಷ್ಟಾಚಾರ ನಿಗ್ರಹದಳದಲ್ಲಿ ಪ್ರಕರಣ ದಾಖಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ;	ಅಪರ ಪೊಲೀಸ್ ಮಹಾ ನಿರ್ದೇಶಕರು, ಭ್ರಷ್ಟಾಚಾರ ನಿಗ್ರಹ ದಳ, ಬೆಂಗಳೂರು ರವರ ಪತ್ರ ದಿನಾಂಕ 27-07-2021ರಲ್ಲಿ ಇಲಾಖೆಯ ನೇಮಕಾತಿಯಲ್ಲಿ ನಡೆದಿದೆ ಎನ್ನಲಾದ ಭ್ರಷ್ಟಾಚಾರದಲ್ಲಿ ಭಾಗಿಯಾಗಿರುವ ಅಧಿಕಾರಿ/ನೌಕರರ ವಿರುದ್ಧ ತನಿಖೆ/ವಿಚಾರಣೆ ಕೈಗೊಳ್ಳಲು ಪೂರ್ವಾನುಮತಿಯನ್ನು ನೀಡುವಂತೆ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಪಡೆ ಮುಖ್ಯಸ್ಥರು), ಬೆಂಗಳೂರು ಇವರನ್ನು ಕೋರಿರುತ್ತಾರೆ.
ಆ	ಕಲಂ 17(ಎ) ಭ್ರಷ್ಟಾಚಾರ ಪ್ರತಿಬಂಧಕ ಕಾಯ್ದೆ-1988 ಹಾಗೂ ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ/14/ಸೇಲೋಯು/2016 ಬೆಂಗಳೂರು ದಿನಾಂಕ:14.03.2016ರ ಕಂಡಿಕೆ (5)ರ ರೀತ್ಯಾ ಪೂರ್ವಾನುಮತಿ ನೀಡುವಂತೆ ಭ್ರಷ್ಟಾಚಾರ ನಿಗ್ರಹದಳದಿಂದ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಅರಣ್ಯ ಪಡೆ ಮುಖ್ಯಸ್ಥರಿಗೆ ಬರೆದಿರುವ ಪತ್ರದ ಗೌಪ್ಯತೆಯನ್ನು ಇಲಾಖಾ ಮುಖ್ಯಸ್ಥರು ಕಾಪಾಡುವಲ್ಲಿ ವಿಫಲರಾಗಿದ್ದು, ಈ ಕುರಿತು ಇವರ ವಿರುದ್ಧ ಸರ್ಕಾರ ಯಾವ ಕಾಲಮಿತಿಯೊಳಗೆ ಕ್ರಮ ಕೈಗೊಳ್ಳಲಾಗುವುದು;	ಈ ಪ್ರಕರಣದ ಯಾವುದೇ ಮಾಹಿತಿ ಸೋರಿಕೆಯಾಗದಂತೆ ಕ್ರಮ ವಹಿಸಲಾಗಿದೆ. ಆದುದರಿಂದ ಯಾವುದೇ ಕ್ರಮ ಕೈಗೊಳ್ಳುವ ಅವಶ್ಯಕತೆ ಇರುವುದಿಲ್ಲ.

ಇ	ಭ್ರಷ್ಟಾಚಾರ ನಿಗ್ರಹದಳದಿಂದ ನೇಮಕಾತಿ ಅಕ್ರಮದಲ್ಲಿ ಭಾಗಿಯಾಗಿರುವ ಅಧಿಕಾರಿಗಳ ವಿರುದ್ಧ ತನಿಖೆಗೆ ಪೂರ್ವಾನುಮತಿ ಪಡೆಯಲು ಪ್ರಧಾನ ಮುಖ್ಯ ಸಂರಕ್ಷಣಾಧಿಕಾರಿ ಅರಣ್ಯ ಪಡೆ ಮುಖ್ಯಸ್ಥರಿಗೆ ಕೋರಿದ್ದು, ಇದುವರೆವಿಗೆ ಅನುಮತಿ ನೀಡದೇ ವಿಳಂಬ ನೀತಿ ಅನುಸರಿಸಲಾಗುತ್ತಿದ್ದು, ಯಾವ ಕಾಲಮಿತಿಯೊಳಗೆ ತನಿಖೆ ನಡೆಸಲು ಅನುಮತಿ ನೀಡಲಾಗುವುದು ಮತ್ತು ವಿಳಂಬಕ್ಕೆ ಕಾರಣಗಳೇನು;	ಅಪರ ಪೋಲೀಸ್ ಮಹಾ ನಿರ್ದೇಶಕರು, ಭ್ರಷ್ಟಾಚಾರ ನಿಗ್ರಹ ದಳ, ಬೆಂಗಳೂರು ಇವರು ದಿನಾಂಕ 27.07.2021ರ ಪತ್ರದಲ್ಲಿ 1988ರ ಭ್ರಷ್ಟಾಚಾರ ಪ್ರತಿಬಂಧಕ ಕಾಯ್ದೆ ಕಲಂ 17(ಎ)ರನ್ವಯ ಮೂರು ತಿಂಗಳೊಳಗೆ, ವಿಶೇಷ ಕಾರಣಗಳಿದ್ದಲ್ಲಿ ಒಂದು ತಿಂಗಳ ಹೆಚ್ಚುವರಿ ಅವಧಿಯೊಳಗೆ ಪೂರ್ವಾನುಮತಿಯನ್ನು ನೀಡಲು ಕೋರಿದ್ದು, ಪೂರ್ವಾನುಮತಿ ನೀಡುವ ಮುನ್ನ ಸಕ್ಷಮ ಪ್ರಾಧಿಕಾರಿಯಾದ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಪಡೆ ಮುಖ್ಯಸ್ಥರು)ರವರು ಇಲಾಖೆಯ ಜಾಗೃತ ದಳಕ್ಕೆ ಪ್ರಾಥಮಿಕ ತನಿಖೆ ಮಾಡಲು ಆದೇಶಿಸಿದ್ದು, ಪ್ರಾಥಮಿಕ ತನಿಖಾ ವರದಿ ಸಲ್ಲಿಸಿದ ನಂತರ ಪರಿಶೀಲಿಸಿ, ಮೇಲೆ ತಿಳಿಸಲಾದ ಅವಧಿಯೊಳಗೆ ನಿಯಮಾನುಸಾರ ಕ್ರಮವಹಿಸಲಾಗುತ್ತದೆ. ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾಗೃತ ದಳದಿಂದ ಕೂಡಲೇ ತನಿಖಾ ವರದಿ ಪಡೆದು ಅಗತ್ಯ ಕ್ರಮ ಕೈಗೊಳ್ಳುವಂತೆ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಪಡೆ ಮುಖ್ಯಸ್ಥರು)ರವರಿಗೆ ಸರ್ಕಾರದಿಂದ ನಿರ್ದೇಶನ ನೀಡಲಾಗಿದೆ.
ಈ	ನೇಮಕಾತಿ ಅಕ್ರಮದಲ್ಲಿ ಭಾಗಿಯಾಗಿರುವ ಆರೋಪ ಹೊತ್ತಿರುವ ಅಧಿಕಾರಿಗಳು ಅರಣ್ಯ ಭವನದಲ್ಲಿಯೇ ಮೊದಲಿನ ಪ್ರಭಾವಿ ಹುದ್ದೆಯಲ್ಲಿ ಮುಂದುವರೆಯುತ್ತಿರುವುದರಿಂದ, ಸಾಕ್ಷಿ ನಾಶ ಮಾಡದಂತೆ ತಡೆಯಲು ಸರ್ಕಾರ ಯಾವ ಕ್ರಮಕ್ಕೆಗೊಳ್ಳುವುದು; ಈ ಆರೋಪಿ ನೌಕರರನ್ನು ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಹುದ್ದೆಯಿಂದ ಬಿಡುಗಡೆಗೊಳಿಸಿ ನ್ಯಾಯಸಮ್ಮತ ತನಿಖೆಗೆ ಸರ್ಕಾರ ಕ್ರಮಕೈಗೊಳ್ಳುವುದೇ; ಆರೋಪಿತ ನೌಕರರನ್ನು ಯಾವ ಕಾಲಮಿತಿಯೊಳಗೆ ಸ್ಥಳ ಬದಲಾವಣೆ ಮಾಡಲಾಗುವುದು?	ಈ ಪ್ರಕರಣದಲ್ಲಿ ಅರಣ್ಯ ಇಲಾಖೆಯ ಜಾಗೃತ ದಳದಿಂದ ಪ್ರಾಥಮಿಕ ತನಿಖೆ/ವಿಚಾರಣೆ ಮಾಡಲು ಆದೇಶಿಸಿದ್ದು, ಸದರಿ ದೂರಿನಲ್ಲಿ ಹೆಸರಿಸಲಾದ ಅಧಿಕಾರಿ/ಸಿಬ್ಬಂದಿಗಳು ಸದರಿ ಭ್ರಷ್ಟಾಚಾರದಲ್ಲಿ ಭಾಗಿಯಾಗಿದ್ದಾರೆಂದು ಕಂಡು ಬಂದಲ್ಲಿ, ಪರಿಶೀಲಿಸಿ ನಿಯಮಾನುಸಾರ ಸೂಕ್ತ ಕ್ರಮ ಕೈಗೊಳ್ಳಲಾಗುವುದು

ಸಂಖ್ಯೆ: ಎಫ್‌ಇಇ 48 ಎಫ್‌ಡಿಇ 2021

(ಉಮೇಶ್ ವಿ. ಕತ್ತಿ)
ಅರಣ್ಯ, ಆಹಾರ ಮತ್ತು ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಸಚಿವರು